"ನೀರನ್ನು ಮಿತವಾಗಿ ಬಳಸಿ"
"ಕನ್ನಡದಲ್ಲೇ ವ್ಯವಹರಿಸಿ"

Fax : 080 - 22945102
Phone : 080 - 22945386
www.bwssb.gov.in

# ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ

# BANGALORE WATER SUPPLY & SEWERAGE BOARD

1ನೇ ಮಹಡಿ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

ಸಂಖ್ಯೆ : ಬೆಂಜಮಂ
No : BWSSB ]ಅಕ/ಮುಆಅ-ಕಾ/23-32-2017/ **2019** /2018-19 ದಿನಾಂಕ Date ]**24.08.2018**

## ನೇಮಕಾತಿ ಅಧಿಸೂಚನೆ

**ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ ಖಾಲಿ ಇರುವ 'ಬಿ' ಮತ್ತು 'ಸಿ' ದರ್ಜೆಯ ವಿವಿಧ ಮಿಕ್ಕುಳಿದ ವೃಂದದ (Non Hyderbad-Karnataka) ಹುದ್ದೆಗಳಿಗೆ – ನೇರ ನೇಮಕಾತಿ**

**(ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಅರ್ಹತಾ ಪರೀಕ್ಷೆಗಳಲ್ಲಿ ಒಟ್ಟಾರೆ ಕನಿಷ್ಠ ಶೇ 50 ಅಂಕ ಗಳಿಸಿರುವವರು ಮಾತ್ರ On-Line ಮುಖಾಂತರ ಅರ್ಜಿಯನ್ನು ಸಲ್ಲಿಸಲು ಅರ್ಹತೆ ಹೊಂದಿರುತ್ತಾರೆ. ಆಪರೇಟರ್ ವೃಂದದಲ್ಲಿ ಪಿಯುಸಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಆದರೆ ಐ.ಟಿ.ಐ ಯಲ್ಲಿ ಶೇ 50 ಅಂಕ ಕಡ್ಡಾಯವಾಗಿ ಗಳಿಸಿರಬೇಕು)**

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವೃಂದ, ನೇಮಕಾತಿ ಮತ್ತು ಬಡ್ತಿ ನಿಬಂಧನೆಗಳು-1981 ಹಾಗೂ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವೃಂದ, ನೇಮಕಾತಿ ಮತ್ತು ಬಡ್ತಿ ನಿಬಂಧನೆಗಳು(ತಿದ್ದುಪಡಿ)-2016ರ ಅನ್ವಯ ಬೆಂಗಳೂರು ಜಲ ಮಂಡಳಿ ಇಲ್ಲಿ ಖಾಲಿ ಇರುವ 'ಬಿ' ಮತ್ತು 'ಸಿ' ದರ್ಜೆಯ ವಿವಿಧ ಮಿಕ್ಕುಳಿದ ವೃಂದದ (Non Hyderbad-Karnataka) ಹುದ್ದೆಗಳ ನೇರ ನೇಮಕಾತಿಗಾಗಿ **ಆನ್-ಲೈನ್** ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆನಂತರದಲ್ಲಿ ಅಭ್ಯರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

**ಬೆಂಗಳೂರು ಜಲಮಂಡಳಿಯ ಅಧಿಸೂಚನೆ ಸಂಖ್ಯೆ: ಬೆಂಜಮಂ/ಮುಆಅ-ಕಾ/23-32-2017/4864/2017-18 ದಿನಾಂಕ: 09.02.2018ರಲ್ಲಿ ನೇರ ನೇಮಕಾತಿ-2015ಕ್ಕೆ ಸಂಬಂಧಿಸಿದಂತೆ ಕಿರಿಯ ಅಭಿಯಂತರ (ಸಿವಿಲ್) ವೃಂದದ ಒಟ್ಟು 13 ಮಿಕ್ಕುಳಿದ ವೃಂದದ (Non Hyderbad-Karnakata) ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸಿ ಅಧಿಸೂಚಿಸಲಾಗಿರುತ್ತದೆ. ಈ ಹುದ್ದೆಗಳನ್ನು ಪ್ರಸ್ತುತ ಅಧಿಸೂಚಿಸಲಾಗುತ್ತಿರುವ ನೇಮಕಾತಿಯಲ್ಲಿ ಪರಿಗಣಿಸುತ್ತಿರುವುದರಿಂದ ನೇರ ನೇಮಕಾತಿ-2015ರಲ್ಲಿ ಕಿರಿಯ ಅಭಿಯಂತರ (ಸಿವಿಲ್) ವೃಂದದ ಒಟ್ಟು 13 ಮಿಕ್ಕುಳಿದ ವೃಂದದ (Non Hyderbad-Karnakata) ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಪೈಕಿ ಯಾವುದಾದರೂ ಅಭ್ಯರ್ಥಿಯು ಸರ್ಕಾರವು ವಿವಿಧ ಮೀಸಲಾತಿಗಳಿಗೆ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಮೀರಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ 13 ಹುದ್ದೆಗಳ ಮೀಸಲಾತಿ ವರ್ಗೀಕರಣಕ್ಕೆ ಮಾತ್ರ ಸೀಮಿತಗೊಳಿಸಿ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದು. ಇಂತಹ ಅಭ್ಯರ್ಥಿಗಳು ಪ್ರಸ್ತುತ ಅರ್ಜಿ ಸಲ್ಲಿಸುವ ವೇಳೆ 2015ರ ನೇಮಕಾತಿಯಲ್ಲಿ ಕಿರಿಯ ಅಭಿಯಂತರ (ಸಿವಿಲ್) ಹುದ್ದೆಯ ಅರ್ಜಿ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು. ಅರ್ಜಿ ಸಂಖ್ಯೆಯನ್ನು ನಮೂದಿಸದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ವಯೋಮಿತಿ ಸಡಿಲಿಕೆಯನ್ನು ಪರಿಗಣಿಸುವುದಿಲ್ಲ. ಅರ್ಜಿ ಸಂಖ್ಯೆಯ ಮಾಹಿತಿಯನ್ನು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಂತರ್ಜಾಲದಲ್ಲಿ ಪ್ರಕಟಿಸಲಾಗಿರುತ್ತದೆ.**

In case of any discrepancy / ambiguity arise with regard to any of the above prescribed rules / procedures, Karnataka Civil Services (General Recruitment) Rules, 1977 and its amendment rules shall prevail.

| ಕ್ರ ಸಂ. | ಹುದ್ದೆಯ ಹೆಸರು | ಮೂಲ ವೃಂದ ಒಟ್ಟು ಹುದ್ದೆಗಳ ಸಂಖ್ಯೆ |
|---|---|---|
| | **ಗ್ರೂಪ್-ಬಿ ವೃಂದ (ತಾಂತ್ರಿಕ/Technical) (Group-B Cadre)** | |
| 1. | ಸಹಾಯಕ ಅಭಿಯಂತರ (ಸಿವಿಲ್) / Assistant Engineer (Civil) | **33** |
| 2. | ಸಹಾಯಕ ಅಭಿಯಂತರ (ಎಲೆಕ್ಟ್ರಿಕಲ್) / Assistant Engineer (Electrical) | **09** |
| 3. | ಸಹಾಯಕ ಅಭಿಯಂತರ (ಮೆಕ್ಯಾನಿಕಲ್) / Assistant Engineer (Mechanical) | **05** |
| 4. | ಸಹಾಯಕ ಅಭಿಯಂತರ (ಕಂಪ್ಯೂಟರ್ ವಿಜ್ಞಾನ) / Assistant Engineer (Computer Science) | **02** |
| | **Total (A)** | **49** |

| | | |
|---|---|---|
| | **ಗ್ರೂಪ್-ಸಿ ವೃಂದ (ತಾಂತ್ರಿಕ/Technical) (Group-C Cadre)** | |
| 5. | ಕಿರಿಯ ಅಭಿಯಂತರ (ಸಿವಿಲ್) / Junior Engineer (Civil) | **23** |
| 6. | ಕಿರಿಯ ಅಭಿಯಂತರ (ಎಲೆಕ್ಟ್ರಿಕಲ್) / Junior Engineer (Electrical) | **12** |
| 7. | ಕಿರಿಯ ಅಭಿಯಂತರ (ಮೆಕ್ಯಾನಿಕಲ್) / Junior Engineer (Mechanical) | **04** |
| | **Total (B)** | **39** |
| | **ಗ್ರೂಪ್-ಸಿ ವೃಂದ (ತಾಂತ್ರಿಕೇತರ/Non-Technical) (Group-C Cadre)** | |
| 8. | ಸಹಾಯಕ / Assistant | **20** |
| 9. | ಆಪರೇಟರ್ / Operator | **01** |
| 10. | ಎರಡನೇ ದರ್ಜೆ ಉಗ್ರಾಣ ಪಾಲಕ / Second Division Store Keeper | **08** |
| 11. | ಮಾಪನ ಓದುಗ / Meter Reader | **110** |
| 12. | ಕಿರಿಯ ಸಹಾಯಕ / Junior Assistant | **02** |
| 13. | ಶೀಘ್ರಲಿಪಿಗಾರರು / Stenographer | **02** |
| 14. | ಬೆರಳಚ್ಚುಗಾರ-ಯಾ-ಡಾಟಾ ಎಂಟ್ರಿ ಆಪರೇಟರ್ / Typist cum Data Entry Operator | **01** |
| | **Total (C)** | **144** |
| | **Grand Total (A+B+C)** | **232** |

**ಹುದ್ದೆವಾರು, ಪ್ರವರ್ಗವಾರು ಹುದ್ದೆಗಳ ವರ್ಗೀಕರಣಗಳ ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ.**

**1.** ಈ ಮೇಲ್ಕಂಡ ಹುದ್ದೆಗಳಿಗೆ ನೇಮಕಾತಿಗಾಗಿ ಅಭ್ಯರ್ಥಿಗಳ ಆಯ್ಕೆಯನ್ನು ಕಾಲ ಕಾಲಕ್ಕೆ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಅನುಸಾರ ಪ್ರಕಟಿಸಲಾದ ಖಾಲಿ ಹುದ್ದೆಗಳಿಗೆ ಅನುಗುಣವಾಗಿ ಆಯ್ಕೆ ಮಾಡಲಾಗುತ್ತದೆ.

1) ಆನ್-ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ: **29.08.2018 ಬೆಳಿಗ್ಗೆ 11 ಘಂಟೆಯ ನಂತರ**
2) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **27.09.2018**
3) ಪರೀಕ್ಷಾ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: **28.09.2018**
**(ಕೆನರಾ ಬ್ಯಾಂಕ್ ಕಛೇರಿಯ ಕಾರ್ಯದ ವೇಳೆಯೊಳಗೆ ಮಾತ್ರ)**

(ಶುಲ್ಕ ಪಾವತಿಸಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಕೊನೆಯ ದಿನಾಂಕವಾಗುವುದು)

ಅರ್ಜಿಗಳನ್ನು ON-LINE ಮೂಲಕ ಭರ್ತಿ ಮಾಡಿ ಪರೀಕ್ಷಾ ಶುಲ್ಕ ಚಲನ್ ಡೌನ್‌ಲೋಡ್ ಮಾಡಿಕೊಂಡು ದೇಶದ ಯಾವುದೇ **ಕೆನರಾ ಬ್ಯಾಂಕ್ ಶಾಖೆಗಳಲ್ಲಿ (ಕಛೇರಿ ವೇಳೆಯೊಳಗೆ ಮಾತ್ರ)** ಸಂದಾಯ ಮಾಡಬಹುದಾಗಿರುತ್ತದೆ. ಇದನ್ನು

ಹೊರತುಪಡಿಸಿ ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಮತ್ತು ಇತ್ಯಾದಿ ಯಾವುದೇ ಮುಖಾಂತರ ಸ್ವೀಕರಿಸಲಾಗುವುದಿಲ್ಲ. ಶುಲ್ಕವನ್ನು ಪಾವತಿಸದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು (ಶುಲ್ಕ ವಿನಾಯಿತಿ ನೀಡಿರುವ ಮೀಸಲಾತಿಗಳನ್ನು ಹೊರತುಪಡಿಸಿ)

2. **ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಜಲಮಂಡಳಿಯ ವೆಬ್‌ಸೈಟ್ www.bwssb.gov.in ನಲ್ಲಿ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿ ತಿಳಿದುಕೊಳ್ಳತಕ್ಕದ್ದು.**

3. **ವಿಶೇಷ ಸೂಚನೆ:** On-line ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಬೆಂಗಳೂರು ಜಲಮಂಡಳಿಯ ಸಹಾಯವಾಣಿ **(Help line) 080 – 2223 8888 or 080–2294 5386** ಮೂಲಕ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು. **(ಕಛೇರಿ ವೇಳೆಯಲ್ಲಿ ಮಾತ್ರ ಸಂಪರ್ಕಿಸುವುದು)**

**ಅರ್ಜಿಗಳನ್ನು ಆನ್–ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ www.bwssb.gov.in ನಲ್ಲಿ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.**

**ಪರೀಕ್ಷಾ ಶುಲ್ಕ:**

| ವಿವರ | 'ಬಿ' ವರ್ಗದ ಹುದ್ದೆಗೆ | 'ಸಿ' ವರ್ಗದ ಹುದ್ದೆಗೆ |
|---|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ)ಗೆ ಸೇರಿದ ಅಭ್ಯರ್ಥಿಗಳಿಗೆ | ರೂ. 600/– | ರೂ. 400/– |
| **ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ–1 ಹಾಗೂ ಇತರೆ ವರ್ಗದ ಮಾಜಿ ಸೈನಿಕ/ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇದೆ.** (ಶೇ. 40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವವರು ಮತ್ತು ಅದಕ್ಕೆ ಸಂಬಂಧಿಸಿದಂತೆ ಜಿಲ್ಲಾ ವೈದ್ಯಾಧಿಕಾರಿಗಳಿಂದ ಪ್ರಮಾಣ ಪತ್ರ ಹೊಂದಿರುವವರು) | | |

**ಸೂಚನೆ: ಮೇಲ್ಕಂಡ ಶುಲ್ಕದ ಜೊತೆಗೆ ಬ್ಯಾಂಕ್ ಸೇವಾ ಶುಲ್ಕ ರೂ. 8/–ಗಳನ್ನು ಅಭ್ಯರ್ಥಿಗಳು ಪಾವತಿಸಬೇಕಾಗಿರುತ್ತದೆ.**

ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಶುಲ್ಕವನ್ನು ಪಾವತಿಸಬೇಕು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಮಂಡಳಿಯು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. (ಶುಲ್ಕ ವಿನಾಯಿತಿ ನೀಡಿರುವ ಮೀಸಲಾತಿಗಳನ್ನು ಹೊರತುಪಡಿಸಿ)

**4. ಅರ್ಹತಾ ಷರತ್ತುಗಳು:**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರ/ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ರಾಜ್ಯ ಸರ್ಕಾರದ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಬೆಂಗಳೂರು ಜಲಮಂಡಳಿಯು ಕಾಯ್ದಿರಿಸಿಕೊಂಡಿದೆ ಮತ್ತು ಮಂಡಳಿಯ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ಉ) ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

ಊ) ನೈತಿಕ ದುರ್ನಡತೆಯಿಂದಾಗಿ/ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೆ ಒಳಪಟ್ಟಿರುವ ವ್ಯಕ್ತಿ ಅಥವಾ ಜಲಮಂಡಳಿಯಲ್ಲಿ ಅಥವಾ ರಾಜ್ಯ/ ಕೇಂದ್ರ/ ಸ್ಥಳೀಯ ಸಂಸ್ಥೆ/ ಕೈಗಾರಿಕಾ/ ವಾಣಿಜ್ಯಕ್ಕೆ ಸಂಬಂಧಪಟ್ಟ

ಅಥವಾ ಇನ್ನಿತರೆ ಸರ್ಕಾರದ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ/ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ/ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.

**5. ಶೈಕ್ಷಣಿಕ ವಿದ್ಯಾರ್ಹತೆ / ವೇತನ ಶ್ರೇಣಿ:**

ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯ / ಪರೀಕ್ಷಾ ಮಂಡಳಿಗಳಿಂದ ಆಯಾ ಹುದ್ದೆಗಳಿಗೆ ನಿಗದಿಪಡಿಸಿರುವ ಅರ್ಹತೆಯ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಅಥವಾ ಸರ್ಕಾರವು ಅಂತಹ ಪರೀಕ್ಷೆಗೆ ಸಮಾನವೆಂದು ಅಂಗೀಕರಿಸಿದ ವಿದ್ಯಾರ್ಹತೆಯನ್ನು ಹೊಂದಿರಬೇಕು. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಬೇಕು. ಪ್ರತಿ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಗಳು ಈ ಕೆಳಗಿನಂತಿವೆ.

| ಕ್ರ. ಸಂ. | ಹುದ್ದೆ ಮತ್ತು ವೇತನ ಶ್ರೇಣಿ<br>**Post & Pay Scale** | ಶೈಕ್ಷಣಿಕ ವಿದ್ಯಾರ್ಹತೆ<br>**Educational Qualification** |
|---|---|---|
| 1. | ಸಹಾಯಕ ಅಭಿಯಂತರ (ಸಿವಿಲ್)<br>Assistant Engineer (Civil)<br>(29780-900-35180-1100-47280-1400-59880-1600-64680) | Should possess a Civil Degree in Engineering or Technology or equivalent qualification from a recognized University of the Union or State Govt and shall be a Computer literate through Passing minimum of Six months duration course in Computer basics. |
| 2. | ಸಹಾಯಕ ಅಭಿಯಂತರ (ಎಲೆಕ್ಟ್ರಿಕಲ್)<br>Assistant Engineer (Electrical)<br>(29780-900-35180-1100-47280-1400-59880-1600-64680) | Should possess a Electrical Degree in Engineering or Technology or equivalent qualification from a recognized University of the Union or State Govt and shall be a Computer literate through Passing minimum of Six months duration course in Computer basics. |
| 3. | ಸಹಾಯಕ ಅಭಿಯಂತರ (ಮೆಕ್ಯಾನಿಕಲ್)<br>Assistant Engineer (Mechanical)<br>(29780-900-35180-1100-47280-1400-59880-1600-64680) | Should possess a Mechanical Degree in Engineering or Technology or equivalent qualification from a recognized University of the Union or State Govt and shall be a Computer literate through Passing minimum of Six months duration course in Computer basics. |
| 4. | ಸಹಾಯಕ ಅಭಿಯಂತರ (ಕಂಪ್ಯೂಟರ್ ವಿಜ್ಞಾನ)<br>Assistant Engineer (Computer Science)<br>(29780-900-35180-1100-47280-1400-59880-1600-64680) | Should possess a Computer Science in Engineering or Technology or equivalent qualification from a recognized University of the Union or State Govt and shall be a Computer literate through Passing minimum of Six months duration course in Computer basics. |
| 5. | ಕಿರಿಯ ಅಭಿಯಂತರ (ಸಿವಿಲ್)<br>Junior Engineer (Civil)<br>(21880-650-27080-900-35180-1100-47280-1400-55680) | Should possess a 3 years Civil Diploma in Engineering or Technology or equivalent preferably in Public Health Engineering and Six months duration course in Computer Science. |
| 6. | ಕಿರಿಯ ಅಭಿಯಂತರ (ಎಲೆಕ್ಟ್ರಿಕಲ್)<br>Junior Engineer (Electrical)<br>(21880-650-27080-900-35180-1100-47280-1400-55680) | Should possess a 3 years Electrical Diploma in Engineering or Technology or equivalent preferably in Public Health Engineering and Six months duration course in Computer Science. |
| 7. | ಕಿರಿಯ ಅಭಿಯಂತರ (ಮೆಕ್ಯಾನಿಕಲ್)<br>Junior Engineer (Mechanical)<br>(21880-650-27080-900-35180-1100-47280-1400-55680) | Should possess a 3 years Mechanical Diploma in Engineering or Technology or equivalent preferably in Public Health Engineering and Six months duration course in Computer Science. |

| | | |
|---|---|---|
| 8. | ಸಹಾಯಕ<br>Assistant<br>(19260-440-20580-650-27890-900-35180-1100-47280-1400-52880) | Should possess a Degree in Arts / Commerce / Science of a recognized University. One year duration Course in Computer basics. |
| 9. | ಆಪರೇಟರ್<br>Operator<br>(17060-440-20580-650-27080-900-35180-1100-47280-1400-51480) | A pass in PUC with ITI certificate in Electrician trade and 2 years experience in the operation and maintenance of pumps. |
| 10. | ಎರಡನೇ ದರ್ಜೆ ಉಗ್ರಾಣ ಪಾಲಕ<br>Second Division Store Keeper<br>(15460-360-16180-440-20580-650-27080-900-35180-1100-47280-1400-48680 | A pass in PUC with Certificate course in Material Management of any recognized Institution and one year duration course in Computer basics. |
| 11. | ಮಾಪನ ಓದುಗ<br>Meter Reader<br>(15460-360-16180-440-20580-650-27080-900-35180-1100-47280-1400-48680) | A pass in PUC or equivalent qualification with one year duration course in Computer basics. |
| 12. | ಕಿರಿಯ ಸಹಾಯಕ<br>Junior Assistant<br>(15460-360-16180-440-20580-650-27080-900-35180-1100-47280-1400-48680) | A pass in PUC or equivalent qualification with one year duration course in Computer basics. |
| 13. | ಶೀಘ್ರಲಿಪಿಗಾರರು<br>Stenographer<br>(19260-440-20580-650-27080-900-35180-1100-47280-1400-52880) | A pass in PUC or equivalent examination. Should have passed Senior Grade Shorthand and Senior Grade Typing in Kannada and English. Should Posses a standard speed prescribed by the Board in both Senior Kannada and Senior English shorthand and Typing with one year course in Computer Science. |
| 14. | ಬೆರಳಚ್ಚುಗಾರ-ಯಾ-ಡಿ.ಇ.ಓ<br>Typist cum Data Entry Operator<br>(15460-360-16180-440-20580-650-27080-900-35180-1100-47280-1400-48680) | A pass in PUC or equivalent examination. Should have passed Senior Grade Typing examination both in Kannada and English. Should possess a speed prescribed by the Board in both Kannada and English Senior Typing with passing one year duration course in Computer basics and with some experience in the line. |

**(In Sl. No 1 to 4 Equivalent Qualification means recognized by University Grants Commission and All India Council for Technical Education)**

7. **ಪಿಂಚಣಿ ಸೌಲಭ್ಯ:-**

ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ: 31-3-2006 ರಂತೆ.

8. **ವಯೋಮಿತಿ:-** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು;

ಅ) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| ಅಭ್ಯರ್ಥಿಗಳು | ಗರಿಷ್ಠ ವಯೋಮಿತಿ |
|---|---|
| ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 35 ವರ್ಷಗಳು |
| ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | 38 ವರ್ಷಗಳು |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಪ್ರವರ್ಗ-1 ಅಭ್ಯರ್ಥಿಗಳಿಗೆ | 40 ವರ್ಷಗಳು |

ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರದಲ್ಲಿ ನಮೂದಿಸಿರುವಂತೆ ಪರಿಗಣಿಸಲಾಗುವುದು. ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

**ಈ ಮುಂದಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು**

i. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

**ವಿವರಣೆ:** (ಎ) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ, ಅಂದರೆ ಡಿಫೆನ್ಸ್ ಸೆಕ್ಯೂರಿಟಿಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು (ಬಿ) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಸ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ. ಮತ್ತು

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

**ಅಥವಾ**

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಸೇವೆಯಲ್ಲಿ ಬಿಡುಗಡೆಯಾದವನು

**ಅಥವಾ**

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇನೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

**ಅಥವಾ**

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು;

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ಈ ಮೇಲ್ಕಂಡ ವರ್ಗದ ಅಭ್ಯರ್ಥಿಗಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುತ್ತಾರೆ.

**ವಿವರಣೆ:** ಕೇಂದ್ರ ಸಶಸ್ತ್ರ ದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ, ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.

ii. ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

iii. ಅಂಗವಿಕಲ ಅಭ್ಯರ್ಥಿಗಳಿಗೆ 10 ವರ್ಷಗಳು.

**ಮೇಲ್ಕಂಡ ಎಲ್ಲಾ ವರ್ಗಗಳಲ್ಲಿ ವಯೋಮಿತಿ ರಿಯಾಯಿತಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಸೂಚನೆಯನ್ನು ಎಚ್ಚರಿಕೆಯಿಂದ ಓದಿ ರಿಯಾಯಿತಿಗೆ ಅರ್ಜಿ ಸಲ್ಲಿಸತಕ್ಕದ್ದು.**

## 9. ಸ್ಪರ್ಧಾತ್ಮಕ ಪರೀಕ್ಷೆ:-

ಈ ಪರೀಕ್ಷೆಯು ವಸ್ತುನಿಷ್ಠ ಬಹು ಆಯ್ಕೆ (Objective Multiple Choice) ಮಾದರಿಯದಾಗಿರುತ್ತದೆ. ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಎರಡೂ ಆವೃತ್ತಿಗಳಿರುತ್ತವೆ.

| ಹುದ್ದೆ<br>Post | ಪತ್ರಿಕೆ<br>Paper | ವಿಷಯ<br>Subject | ಅಂಕಗಳು<br>Marks | ಒಟ್ಟು ಪ್ರಶ್ನೆಗಳು<br>Total Questions | ಅವಧಿ<br>Duration |
|---|---|---|---|---|---|
| **Asst. Engineer (Civil)**<br>**Asst. Engineer (Electrical)**<br>**Asst. Engineer (Mechanical)**<br>**Asst. Engineer (Comp. Science)**<br>**Junior Engineer (Civil)**<br>**Junior Engineer (Electrical)**<br>**Junior Engineer (Mechanical)** | **Paper-1** | ಸಾಮಾನ್ಯ ಜ್ಞಾನ<br>General Knowledge (Respective Subject prescribed to the post Level) | 100 | 100 | Two Hours |
| | **Paper -2** | ಐಚ್ಛಿಕ ವಿಷಯ<br>Optional Paper (Respective Subject prescribed to the post) | 100 | 100 | Two Hours |
| **Assistant (FDA)** | **Paper-1** | ಸಾಮಾನ್ಯ ಜ್ಞಾನ<br>General Knowledge (Degree Level) | 100 | 100 | Two Hours |
| **Second Division Store Keeper**<br>**Meter Reader**<br>**Junior Assistant (SDA)**<br>**Operator** | **Paper-1** | ಸಾಮಾನ್ಯ ಜ್ಞಾನ<br>General Knowledge (PUC Level) | 100 | 100 | Two Hours |
| **Stenographer** | **Paper-1** | ಸಾಮಾನ್ಯ ಜ್ಞಾನ<br>General Knowledge (PUC Level) | 100 | 100 | Two Hours |
| | | ಪ್ರಾಯೋಗಿಕ ಪರೀಕ್ಷೆ<br>Practical test | 100 | 100 | Two Hours and Fifteen Minutes |
| **Typist cum DEO** | **Paper-1** | ಸಾಮಾನ್ಯ ಜ್ಞಾನ<br>General Knowledge (PUC Level) | 100 | 100 | Two Hours |
| | | ಪ್ರಾಯೋಗಿಕ ಪರೀಕ್ಷೆ<br>Practical test | 100 | 100 | Fifteen Minutes |

**ಋಣಾತ್ಮಕ ಮೌಲ್ಯಮಾಪನವಿದ್ದು, ಪ್ರತಿ ತಪ್ಪು ಉತ್ತರಗಳಿಗೆ 1/3 ರಷ್ಟು ಅಂಕಗಳನ್ನು ಕಳೆಯಲಾಗುವುದು/ಕಟಾಯಿಸಲಾಗುವುದು.**

ಸ್ಪರ್ಧಾತ್ಮಕ ಪರೀಕ್ಷೆಯನ್ನು **ಬೆಂಗಳೂರು ಕೇಂದ್ರಗಳಲ್ಲಿ ಮಾತ್ರ** ನಡೆಸಲಾಗುವುದು. ಸ್ಪರ್ಧಾತ್ಮಕ ಪರೀಕ್ಷೆಗಳ ವೇಳಾಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಮಂಡಳಿಯೊಂದಿಗೆ ಸಮಾಲೋಚಿಸಿ ನಿಗದಿಪಡಿಸುವುದು. ಈ ಮಾಹಿತಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in** ಮತ್ತು ಮಂಡಳಿಯ ವೆಬ್‌ಸೈಟ್ **www.bwssb.gov.in** ನಲ್ಲಿ ಪ್ರಕಟಿಸಲಾಗುವುದು. ಪರೀಕ್ಷೆಗಳ ದಿನಾಂಕಗಳನ್ನು ಅಧಿಸೂಚಿಸಿದಾಗ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ಅಂತರ್ಜಾಲದಿಂದ (**http://kea.kar.nic.in**) ಅಭ್ಯರ್ಥಿಗಳು ಡೌನ್ ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ.

ಶೀಘ್ರಲಿಪಿಗಾರ ಮತ್ತು ಬೆರಳಚ್ಚುಗಾರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಸರ್ಕಾರದ ಅಂಗೀಕೃತ ಸಂಸ್ಥೆಯಿಂದ ಪ್ರಾಯೋಗಿಕ ಪರೀಕ್ಷೆಯನ್ನು ಬೆಂಗಳೂರು ಜಲ ಮಂಡಳಿಯಿಂದ ನಡೆಸಲಾಗುವುದು. ಪ್ರಾಯೋಗಿಕ ಪರೀಕ್ಷೆಯ ದಿನಾಂಕ ಮತ್ತು ಸ್ಥಳದ ವಿವರಗಳನ್ನು ನಂತರದ ದಿನಗಳಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ / ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

ಅಭ್ಯರ್ಥಿಯು ಯಾವುದೇ ವೃಂದದ ಒಂದು ಹುದ್ದೆಗೆ ಸ್ಥಳೀಯ ವೃಂದ ಮೀಸಲಾತಿ (Hyderbad-Karnataka) ಹಾಗೂ ಮಿಕ್ಕುಳಿದ ವೃಂದ ಮೀಸಲಾತಿ (Non Hyderbad-Karnataka) ಈ ಎರಡು ಮೀಸಲಾತಿಯನ್ನು ಕೋರಿ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸಿದ್ದಲ್ಲಿ, ಸದರಿ ಮೀಸಲಾತಿಗೆ ಸಂಬಂಧಿಸಿದಂತೆ ಒಂದೇ ಸಾಮಾನ್ಯ ಪರೀಕ್ಷೆ ಇರುವುದರಿಂದ ಯಾವುದಾದರೂ ಒಂದು ಪರೀಕ್ಷೆಗೆ ಹಾಜರಾಗುವುದು. ಈ ಪರೀಕ್ಷೆಯಲ್ಲಿ ಪಡೆಯುವ ಅಂಕಗಳನ್ನು ಈ ಹುದ್ದೆಯ ಎರಡೂ ಮೀಸಲಾತಿಯ ಆಯ್ಕೆಯ ಸಂದರ್ಭದಲ್ಲಿ ಮೆರಿಟ್ ಆಧಾರದಲ್ಲಿ ಪರಿಗಣಿಸಲಾಗುವುದು.

ಕಿರಿಯ ಸಹಾಯಕ, ಎರಡನೇ ದರ್ಜೆ ಉಗ್ರಾಣ ಪಾಲಕ, ಮಾಪನ ಓದುಗ, ಶೀಘ್ರಲಿಪಿಗಾರರು ಹಾಗೂ ಬೆರಳಚ್ಚುಗಾರ-ಯಾ-ಡಿಇಓ ಹುದ್ದೆಗಳಿಗೆ ಒಂದೇ ಸಾಮಾನ್ಯ ಪರೀಕ್ಷೆ ಇರುವುದರಿಂದ ಈ ಹುದ್ದೆಗಳಲ್ಲಿ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿಯನ್ನು ಸಲ್ಲಿಸುವ ಅಭ್ಯರ್ಥಿಗಳು ಯಾವುದಾದರೂ ಒಂದು ಹುದ್ದೆಯ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಿ ಪರೀಕ್ಷೆ ಬರೆಯುವುದು. ಈ ಪರೀಕ್ಷೆಯಲ್ಲಿ ಪಡೆಯುವ ಅಂಕಗಳನ್ನು ಮೇಲೆ ತಿಳಿಸಿರುವ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅನುಸಾರ ಆಯ್ಕೆಯ ಸಂದರ್ಭದಲ್ಲಿ ಮೆರಿಟ್ ಆಧಾರದಲ್ಲಿ ಪರಿಗಣಿಸಲಾಗುವುದು.

ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿಯನ್ನು ಸಲ್ಲಿಸಬಹುದು ಮತ್ತು ಹುದ್ದೆಗಳಿಗೆ ಅನುಗುಣವಾಗಿ ಪ್ರತ್ಯೇಕವಾಗಿ ನಿಗದಿತ ಶುಲ್ಕವನ್ನು ಪಾವತಿಸಬೇಕು. ಆದಾಗ್ಯೂ ಒಂದೇ ಸಾಮಾನ್ಯ ಪರೀಕ್ಷೆ ಇರುವ ಹುದ್ದೆಗಳಿಗೂ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಶುಲ್ಕವನ್ನು ಭರಿಸತಕ್ಕದ್ದು.

**10. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು**: ಜಾತಿ ಮೀಸಲಾತಿ ಕೋರಬಯಸುವ:

1. ಪ.ಜಾ/ಪ.ಪಂ. ಅಭ್ಯರ್ಥಿಗಳು ನಮೂನೆ 'ಡಿ' ರಲ್ಲಿ
2. ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ 'ಇ' ನಲ್ಲಿ
3. 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿತ ತಹಶೀಲ್ದಾರರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವು, ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ: **27.09.2018**ರೊಳಗೆ ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಅಂದರೆ, ಹಿಂದುಳಿದ ವರ್ಗಗಳ ಪ್ರ-2ಎ, ಪ್ರ-2ಬಿ, ಪ್ರ-3ಎ ಮತ್ತು ಪ್ರ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದ ದಿನಾಂಕದಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ 05 ವರ್ಷಗಳ ಅವಧಿಯಲ್ಲಿರಬೇಕು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ಅನುಬಂಧರಲ್ಲಿ ನೀಡಲಾಗಿದೆ.

**11. ಗ್ರಾಮೀಣ ಅಭ್ಯರ್ಥಿ:**

1. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
2. ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ-2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.
3. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಅವರು ಕೆನೆಪದರ(Creamy Layer)ಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್ ರವರಿಂದ ಪಡೆದಿರತಕ್ಕದ್ದು. ಕೆನೆಪದರ(Creamy Layer)ಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಲ್ಲಿಸದಿರುವ/ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.
4. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

**ಸೂಚನೆ:** ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ-2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

**12. ಕನ್ನಡ ಮಾಧ್ಯಮ ಅಭ್ಯರ್ಥಿ:**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು.

**13. ಯೋಜನಾ ನಿರಾಶ್ರಿತ ಅಭ್ಯರ್ಥಿ:**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 23 ಸೆನೆನಿ 99, ದಿನಾಂಕ: 23-11-2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸತಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದಿರಬೇಕು.

**14. ಅಂಗವಿಕಲ ಅಭ್ಯರ್ಥಿ:-**

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಉಪನಿಯಮ 2(ಕೆ)( ii) ರಲ್ಲಿ ನಿರ್ದಿಷ್ಟಪಡಿಸಿರುವ ಕ್ರಮ ಸಂಖ್ಯೆ i ರಿಂದ vii ರವರೆಗಿನ (Blind, Low vision, Leprosy cured, Hearing impairment, Locomotor disability, Mental retardation & Mental illness) ವೈಕಲ್ಯತೆಯ ಶೇ. 40ಕ್ಕೆ ಕಡಿಮೆಯಿಲ್ಲದಿರುವ ಅಂಗವಿಕಲ ವ್ಯಕ್ತಿಗಳು.

ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ದಿನಾಂಕ: 19-11-2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾಮಟ್ಟದ ವೈದ್ಯಕೀಯ ಮಂಡಳಿಯಿಂದ ವೈದ್ಯಕೀಯ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 74 ಸೆನೆನಿ 2006, ದಿನಾಂಕ:30-10-2007 ರಲ್ಲಿ ಅಂಧ/ದೃಷ್ಟಿ ಮಾಂದ್ಯ ಅಂಗವಿಕಲತೆಯ ಮೀಸಲಾತಿ ಕೋರಿದ್ದಲ್ಲಿ, ಆಯ್ಕೆ ಪ್ರಾಧಿಕಾರ ವೈದ್ಯಕೀಯ ಸಮಿತಿಯನ್ನು ರಚಿಸಿ, ವೈದ್ಯಕೀಯ ಪರೀಕ್ಷೆಯಲ್ಲಿ ಅಂತಹ ಅಭ್ಯರ್ಥಿಗಳ ಅಂಧ/ದೃಷ್ಟಿ ಮಾಂದ್ಯತೆಯನ್ನು ಪರೀಕ್ಷಿಸಿ ಖಚಿತಪಡಿಸಿಕೊಳ್ಳಬೇಕೆಂದು ನಿರ್ದಿಷ್ಟಪಡಿಸಿದ್ದು, ಅದರಂತೆ ಆಯ್ಕೆ ಪ್ರಾಧಿಕಾರವು ಪರೀಕ್ಷಾ ಪೂರ್ವ ಅಥವಾ ಪರೀಕ್ಷೋತ್ತರದ ನಂತರ ನಡೆಸುವ ವೈದ್ಯಕೀಯ ಪರೀಕ್ಷೆಯ ಅಂತಿಮ ವರದಿಗೆ ಅಂಧ / ದೃಷ್ಟಿಮಾಂದ್ಯ ಅಭ್ಯರ್ಥಿಗಳ ಮೀಸಲಾತಿಯು ಬದ್ಧವಾಗಿರುತ್ತದೆ.

**ಸೂಚನೆ:** ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ: **27.09.2018**ರೊಳಗೆ ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ. ಪ್ರಮಾಣ ಪತ್ರಗಳನ್ನು ನೇಮಕಾತಿ ಪ್ರಾಧಿಕಾರ ಪರಿಶೀಲಿಸುವ ಸಂದರ್ಭದಲ್ಲಿ ತಪ್ಪದೆ ಹಾಜರುಪಡಿಸತಕ್ಕದ್ದು. ಇದಕ್ಕೆ ಹೆಚ್ಚಿನ ಕಾಲಾವಕಾಶ ನೀಡಲಾಗುವುದಿಲ್ಲ. ಅರ್ಹತೆ, ಮೀಸಲಾತಿ ಇತ್ಯಾದಿಗಳ ಬಗ್ಗೆ ಅಭ್ಯರ್ಥಿಯು ಖಾತ್ರಿಪಡಿಸಿಕೊಂಡು ಅರ್ಜಿ ಸಲ್ಲಿಸುವುದು ಅವರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದ್ದಲ್ಲಿ ನೇಮಕಾತಿಗೆ ಅರ್ಹರಾಗುವುದಿಲ್ಲ.

**15. ಹೈದರಾಬಾದ್ ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳು ಮಿಕ್ಕುಳಿದ ಮೂಲ ವೃಂದದ ಹುದ್ದೆಗಳಿಗೂ ಅರ್ಜಿಯನ್ನು ಸಲ್ಲಿಸಲು ಅರ್ಹರಿರುತ್ತಾರೆ. ಆದ್ದರಿಂದ ಮಿಕ್ಕುಳಿದ ವೃಂದದ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸಿ ನಿಗದಿತ ಶುಲ್ಕವನ್ನು ಪ್ರತ್ಯೇಕವಾಗಿ ಪಾವತಿಸಬೇಕು. ಒಂದು ವೇಳೆ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸದಿದ್ದಲ್ಲಿ ಹೈದರಾಬಾದ್ ಕರ್ನಾಟಕ ಮೀಸಲಾತಿಯಲ್ಲಿ ಆಯ್ಕೆಯಾಗದೇ ಉಳಿದ ಅಭ್ಯರ್ಥಿಗಳನ್ನು ಯಾವುದೇ ಕಾರಣಕ್ಕೂ ಮಿಕ್ಕುಳಿದ ವೃಂದದ**

**ಆಯ್ಕೆಗೆ ಪರಿಗಣಿಸಲಾಗುವುದಿಲ್ಲ ಹಾಗೂ ಮಿಕ್ಕುಳಿದ ವೃಂದದ ಮೀಸಲಾತಿಗೆ ಅಧಿಸೂಚಿಸಲಾಗಿರುವ ಹುದ್ದೆಗಳಿಗೆ ಸ್ಥಳೀಯ ವೃಂದದ ಅಭ್ಯರ್ಥಿಗಳು ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿರುವುದರಿಂದ ಸ್ಥಳೀಯ ವೃಂದದ ಅಭ್ಯರ್ಥಿಗಳು ಮಿಕ್ಕುಳಿದ ವೃಂದದ ಮೀಸಲಾತಿಯಡಿಯಲ್ಲಿ ಮಂಡಳಿಗೆ ಆಯ್ಕೆಗೊಂಡು ನೇಮಕಾತಿ ಹೊಂದಿದ್ದಲ್ಲಿ, ಅಂತಹ ಅಭ್ಯರ್ಥಿಗಳಿಗೆ ಸೇವಾವಧಿಯಲ್ಲಿ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಯಾವುದೇ ಸವಲತ್ತು ನೀಡಲಾಗುವುದಿಲ್ಲ ಹಾಗೂ ಇದರ ಬಗ್ಗೆ ಹಕ್ಕೊತ್ತಾಯ ಮಾಡುವಂತಿಲ್ಲ.**

**16. ಅಭ್ಯರ್ಥಿಗಳು ಕೇವಲ ಒಂದು ಹುದ್ದೆಗೆ ಒಂದು ಬಾರಿ ಮಾತ್ರ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಯಾವುದೇ ಕಾರಣದಿಂದಲೂ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.**

**17. ಪರೀಕ್ಷಾರ್ಥ ಅವಧಿ(Probationary)/ಕನಿಷ್ಠ ಸೇವೆ/ನಿಯುಕ್ತಿ:**

- ಆಯ್ಕೆಯಾದ ಅಭ್ಯರ್ಥಿಗಳನ್ನು ಬೆಂಗಳೂರು ಜಲಮಂಡಳಿಯ ಕಾರ್ಯ ವ್ಯಾಪ್ತಿಯ ಯಾವುದೇ ಪ್ರದೇಶಗಳಿಗೆ ನಿಯುಕ್ತಿಗೊಳಿಸಲಾಗುವುದು ಮತ್ತು ಮಂಡಳಿಯ ವೃಂದ, ನೇಮಕಾತಿ ಮತ್ತು ಬಡ್ತಿ ನಿಬಂಧನೆಗಳು–1981ರ ಪ್ರಕಾರ 2 ವರ್ಷಗಳ ಪರೀಕ್ಷಾರ್ಥ (Probationary) ಅವಧಿಯಲ್ಲಿರುತ್ತಾರೆ.
- ಆಯ್ಕೆಯಾದ ಅಭ್ಯರ್ಥಿಯು ಬೆಂಗಳೂರು ಜಲಮಂಡಳಿಯಲ್ಲಿ ಕನಿಷ್ಠ 3 ವರ್ಷಗಳ ಸೇವೆಯನ್ನು ಸಲ್ಲಿಸುವುದಾಗಿ ರೂ. 200/– (ಎರಡು ನೂರು ಮಾತ್ರ)ರ ಛಾಪಾ ಕಾಗದದಲ್ಲಿ ಒಪ್ಪಂದ ಮಾಡಿಕೊಳ್ಳಬೇಕು.
- ಆಯ್ಕೆಯಾದ ಅಭ್ಯರ್ಥಿಯು ಬೆಂಗಳೂರು ಜಲಮಂಡಳಿ ವ್ಯಾಪ್ತಿಯ ಹೊರಘಟಕಗಳಲ್ಲಿ ಕಾರ್ಯ ನಿರ್ವಹಿಸುತ್ತೇನೆಂದು ಮತ್ತು ಕನಿಷ್ಠ ಐದು ವರ್ಷಗಳ ಸೇವೆಯನ್ನು ಸಲ್ಲಿಸುವವರೆಗೆ ಬೆಂಗಳೂರಿಗೆ ವರ್ಗಾವಣೆಯನ್ನು ಕೋರುವುದಿಲ್ಲವೆಂದು ಮುಚ್ಚಳಿಕೆಯನ್ನು ಕೊಡಬೇಕಾಗುತ್ತದೆ.
- ನೇಮಕಗೊಂಡ ಅಭ್ಯರ್ಥಿಯು ನಿಗದಿಗೊಳಿಸಿದ ವಿದ್ಯಾರ್ಹತೆಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿದ್ದಲ್ಲಿ ಹೆಚ್ಚಿನ ವಿದ್ಯಾರ್ಹತೆಯ ಆಧಾರದ ಅಡಿಯಲ್ಲಿ ಉನ್ನತ ಹುದ್ದೆಗೆ ಅವರ ಕೋರಿಕೆಯನ್ನು ಪರಿಗಣಿಸಲಾಗುವುದಿಲ್ಲ.

**18. ಕನ್ನಡ ಭಾಷೆ :–**

ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುವವರು ಕನ್ನಡ ಭಾಷೆಯನ್ನು ಪ್ರಥಮ ಭಾಷೆಯಾಗಿ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಾಸ ಮಾಡಿದ್ದಲ್ಲಿ ಅಂತಹ ಅಭ್ಯರ್ಥಿಗಳು ಕನ್ನಡ ಭಾಷಾ ಪರೀಕ್ಷೆಯಲ್ಲಿ ಪ್ರತ್ಯೇಕವಾಗಿ ಉತ್ತೀರ್ಣ ಹೊಂದುವ ಅವಶ್ಯಕತೆ ಇರುವುದಿಲ್ಲ. ಒಂದು ವೇಳೆ ಕನ್ನಡ ಭಾಷೆಯನ್ನು ಪ್ರಥಮ ಭಾಷೆಯಾಗಿ ಅಥವಾ ದ್ವಿತೀಯ ಭಾಷೆಯಾಗಿ ಉತ್ತೀರ್ಣತೆ ಹೊಂದದೇ ಇರುವವರು ಸೇವೆಗೆ ಹಾಜರಾದ ನಂತರ ಪರೀಕ್ಷಣಾ ಅವಧಿ ಮುಕ್ತಾಯಗೊಳ್ಳುವ ಮೊದಲೇ ಪ್ರತ್ಯೇಕವಾಗಿ ಪರೀಕ್ಷೆ ಬರೆದು ತೇರ್ಗಡೆ ಹೊಂದುವುದು ಕಡ್ಡಾಯವಾಗಿರುತ್ತದೆ. ಈ ವಿಷಯದಲ್ಲಿ ಕಾನೂನಾತ್ಮಕ ವಿವಾದಗಳು ಉಂಟಾದಲ್ಲಿ ಮಂಡಳಿಯ ನಿರ್ಧಾರವೇ ಅಂತಿಮ ನಿರ್ಧಾರವಾಗಿರುತ್ತದೆ.

**19. ಆಯ್ಕೆ ವಿಧಾನ:**

ಪ್ಯಾರಾ 5 ರಲ್ಲಿ, ಕ್ರಮ ಸಂಖ್ಯೆ 1 ರಿಂದ 12 ರ ವರೆಗಿನ ಹುದ್ದೆಗಳಿಗೆ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿರುವ ಅಂಕಗಳನ್ನು ಮಾತ್ರ ಪರಿಗಣಿಸಿ ಜೇಷ್ಠತೆಯ ಆಧಾರದ ಮೇಲೆ, ಕ್ರಮ ಸಂಖ್ಯೆ 13 ಮತ್ತು 14 ರ ಹುದ್ದೆಗಳಿಗೆ ಶೇ. 50% ರಷ್ಟು ಸ್ಪರ್ಧಾತ್ಮಕ ಪರೀಕ್ಷೆ ಮತ್ತು ಶೇ. 50% ಪ್ರಾಯೋಗಿಕ ಪರೀಕ್ಷೆಯಲ್ಲಿನ ಅಂಕಗಳನ್ನು ಸಮಾನವಾಗಿ ಪರಿಗಣಿಸಿ ಮತ್ತು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೆಹಿಮ 1995 ದಿನಾಂಕ: 20.06.1995, ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 53 ಸೆನೆನಿ 2007 ದಿನಾಂಕ: 04.01.2008, ಸರ್ಕಾರಿ ಸುತ್ತೋಲೆ ಸಂಖ್ಯೆ: ಸಿಆಸುಇ 16 ಸೇನೆನಿ 2008 ಬೆಂಗಳೂರು ದಿನಾಂಕ: 01.09.2008ರಲ್ಲಿ ತಿಳಿಸಿರುವಂತೆ ಮೀಸಲಾತಿ ನಿಯಮಗಳನ್ನು ಅನುಸರಿಸಿ ಆಯ್ಕೆ ಮಾಡಲಾಗುವುದು. ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಇಬ್ಬರು ಅಥವಾ ಹೆಚ್ಚು ಅಭ್ಯರ್ಥಿಗಳು ಸಮಾನ ಅಂಕಗಳನ್ನು ಗಳಿಸಿದರೆ, ಅಂಕಗಳ ಅರ್ಹತಾ ಪಟ್ಟಿ ತಯಾರಿಸುವಾಗ ಅಂತಹ ಅಭ್ಯರ್ಥಿಗಳ ಅರ್ಹತೆಯನ್ನು ವಯಸ್ಸಿನ ಆಧಾರದ ಮೇಲೆ ನಿಗದಿಪಡಿಸಲಾಗುವುದು. ವಯಸ್ಸಿನಲ್ಲಿ ಹಿರಿಯರಾದವರನ್ನು ಅರ್ಹತಾ ಪಟ್ಟಿಯಲ್ಲಿ ಹಿರಿಯರೆಂದು ತೋರಿಸಲಾಗುವುದು.

- **ಅಧಿಸೂಚಿಸಲಾಗಿರುವ ಯಾವುದೇ ಹುದ್ದೆಗಳ ನೇರ ನೇಮಕಾತಿಗಾಗಿ ಯಾವುದೇ ವಿಧವಾದ ಸಂದರ್ಶನ ಇರುವುದಿಲ್ಲ.**
- **ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಬಯಸಿದ್ದಲ್ಲಿ, ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸಿ ನಿಗದಿತ ಶುಲ್ಕವನ್ನು ಭರಿಸಬೇಕು.**

**ಅಂಗವಿಕಲ ಮೀಸಲು ಸ್ಥಾನಗಳ ವರ್ಗೀಕರಣಕ್ಕೆ ಅನುಗುಣವಾಗಿ ವಿವಿಧ ವೃಂದಗಳಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ರೋಸ್ಟರ್ ಬಿಂದುಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 128 ಸೇನೆನಿ 2006, ಬೆಂಗಳೂರು ದಿನಾಂಕ: 01.08.2009 ಮತ್ತು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 48 ಸೇನೆನಿ 2012, ಬೆಂಗಳೂರು ದಿನಾಂಕ: 10.06.2013 ರನ್ವಯ ಅಂಗವೈಕಲ್ಯತೆಯನ್ನು ನಿಗದಿಪಡಿಸಿ, ಆಯಾ ನಿರ್ದಿಷ್ಟ ಅಂಗವೈಕಲ್ಯತೆ ಹೊಂದಿರುವವರನ್ನು ಶ್ರೇಯಾಂಕದ ಅನುಸಾರ ಆಯ್ಕೆ ಮಾಡಲಾಗುವುದು. ಒಂದು ವೇಳೆ ಆ ಬಿಂದುಗಳೆದುರು ನಿರ್ದಿಷ್ಟಪಡಿಸಿದ ಅಂಗವೈಕಲ್ಯತೆ ಹೊಂದಿದ ಅಂಗವಿಕಲ ಅಭ್ಯರ್ಥಿಗಳು ಲಭ್ಯವಾಗದಿದ್ದ ಪಕ್ಷದಲ್ಲಿ ಬೇರೆ ಅಂಗವೈಕಲ್ಯತೆ ಹೊಂದಿರುವವರನ್ನು ಶ್ರೇಯಾಂಕದನುಸಾರ ಆಯ್ಕೆಗೆ ಪರಿಗಣಿಸಲಾಗಿದೆ.**

**20. <u>ಮೂಲ ದಾಖಲಾತಿಗಳ ಪರಿಶೀಲನೆ:</u>**

ಅಧಿಸೂಚಿಸಲಾಗಿರುವ ಹುದ್ದೆಗಳಿಗೆ ಸಂಬಂಧಿಸಿದಂತೆ ಸ್ಪರ್ಧಾತ್ಮಕ ಪರೀಕ್ಷೆಯ ಫಲಿತಾಂಶ ಪ್ರಕಟಣೆಯ ನಂತರ ಜೇಷ್ಠತೆಯಲ್ಲಿರುವ ಅಭ್ಯರ್ಥಿಗಳನ್ನು ಮೀಸಲಾತಿಗನುಸಾರವಾಗಿ **1:3 ಆಧಾರದಲ್ಲಿ** ಮೂಲ ದಾಖಲಾತಿಗಳ ಪರಿಶೀಲನೆಗೆ ಕರೆಯಲಾಗುವುದು. ಮೂಲ ದಾಖಲಾತಿಗಳ ಪರಿಶೀಲನೆ ವೇಳೆಯಲ್ಲಿ ಅಭ್ಯರ್ಥಿಗಳು ಶೈಕ್ಷಣಿಕ ಮತ್ತು ಮೀಸಲಾತಿ ಸಂಬಂಧಿತ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

**ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ/ಪ್ರಾಯೋಗಿಕ ಪರೀಕ್ಷೆ/ ದಾಖಲೆಗಳ ಪರಿಶೀಲನೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆ ನೀಡಲಾಗುವುದಿಲ್ಲ.**

**21. <u>ಪ್ರಮುಖ ಸೂಚನೆಗಳು:</u>**

ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶವಿರುವುದಿಲ್ಲ. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು / ದಾಖಲಾತಿಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧುವಾಗಿರುವಂತೆ, ಆಯ್ಕೆ ಪ್ರಾಧಿಕಾರವು ಸೂಚಿಸಿದಾಗ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.

1) ಕಡ್ಡಾಯವಾಗಿ ಹಾಜರು ಪಡಿಸಬೇಕಾದ ವಿದ್ಯಾರ್ಹತೆ/ ಜನ್ಮ ದಿನಾಂಕ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ: ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
2) ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ ಅಥವಾ ನಿಗದಿತ ನಮೂನೆ ಹಾಗೂ ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕದೊಳಗೆ ಪಡೆಯದೇ ಇದ್ದಲ್ಲಿ: ಆ ಮೀಸಲಾತಿಯನ್ನು ರದ್ದು ಪಡಿಸಿ ಸಾಮಾನ್ಯ ಅರ್ಹತೆಯಲ್ಲಿ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.
3) ರಾಜ್ಯ ಸರ್ಕಾರಿ / ಕೇಂದ್ರ ಸರ್ಕಾರಿ /ಸ್ಥಳೀಯ ಪ್ರಾಧಿಕಾರ ನೌಕರರು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣ ಪತ್ರವನ್ನು ಒದಗಿಸಬೇಕು ಇಲ್ಲದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
4) ಶೈಕ್ಷಣಿಕ ಅರ್ಹತಾ ಪರೀಕ್ಷೆಗೆ ಕುಳಿತಿರುವ ಮತ್ತು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಫಲಿತಾಂಶ ಪ್ರಕಟವಾಗದೆ ಇರುವ ಸಂದರ್ಭದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

**<u>22. ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು :</u>**

1. ಆಯಾ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆ ಹೊಂದಿರುವ ಪ್ರಮಾಣ ಪತ್ರಗಳು ಅಥವಾ ತತ್ಸಮಾನ ವಿದ್ಯಾರ್ಹತೆಯ ಅಂಕಪಟ್ಟಿಗಳು
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ.
3. ವಿವಿಧ ಮೀಸಲಾತಿಗಳನ್ನು ಕೋರಿದ್ದಲ್ಲಿ, ನಿಗದಿತ ನಮೂನೆಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರಗಳು.

**<u>23. ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು :</u>**

1. ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ

